# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 602
ಸದಸ್ಯರ ಹೆಸರು : ಶ್ರೀ ಪ್ರದೀಪ ಶೆಟ್ಟರ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 10-03-2026
ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಧಾರವಾಡ ನಗರದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳು ಎಷ್ಟು; (ವಿಧಾನಸಭಾ ಕ್ಷೇತ್ರವಾರು ಸಂಕ್ಷಿಪ್ತ ಮಾಹಿತಿ ನೀಡುವುದು) | ಧಾರವಾಡ ನಗರದಲ್ಲಿ 02 ಇಂದಿರಾ ಕ್ಯಾಂಟೀನ್ ಗಳು ಕಾರ್ಯನಿರ್ವಹಿಸುತ್ತಿವೆ.<br>01 ಇಂದಿರಾ ಕ್ಯಾಂಟೀನ್ - ಹುಬ್ಬಳ್ಳಿ-ಧಾರವಾಡ ಪಶ್ಚಿಮ ವಿಧಾನಸಭಾ ಕ್ಷೇತ್ರದಲ್ಲಿ ಮತ್ತು 01 ಇಂದಿರಾ ಕ್ಯಾಂಟೀನ್ - ಹುಬ್ಬಳ್ಳಿ-ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿವೆ. |
| ಆ) | ಕಳೆದ ಮೂರು ವರ್ಷಗಳಿಂದ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರು ಮಾಡಲಾಗಿರುವ ಇಂದಿರಾ ಕ್ಯಾಂಟೀನ್‌ಗಳು ಎಷ್ಟು; | ಪ್ರಸ್ತುತ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 4 ಇಂದಿರಾ ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಕಳೆದ ಮೂರು ವರ್ಷಗಳಿಂದ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಯಾವುದೇ ಇಂದಿರಾ ಕ್ಯಾಂಟೀನ್‌ಗಳನ್ನು ಮಂಜೂರು ಮಾಡಿರುವುದಿಲ್ಲ. |
| ಇ) | ಧಾರವಾಡ ನಗರದ ಕೆಲವು ಭಾಗಗಳಲ್ಲಿ ಜನರ ವಾಸಸ್ಥಾನ ಇಲ್ಲದಿರುವ ಕಡೆಯೂ ಇಂದಿರಾ ಕ್ಯಾಂಟೀನ್‌ಗಳಿದ್ದು ಇಲ್ಲಿ ಪರಿಣಾಮಕಾರಿಯಾಗಿ ಯೋಜನೆ ಅನುಷ್ಠಾನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಧಾರವಾಡ ನಗರದಲ್ಲಿ 02 ಇಂದಿರಾ ಕ್ಯಾಂಟೀನ್ ಗಳು ಅಂದರೆ, 01 ಹೊಸ ಬಸ್ ನಿಲ್ದಾಣ, ಧಾರವಾಡ 01 ಮಿನಿ ವಿಧಾನಸೌಧ, ಧಾರವಾಡ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ಪ್ರದೇಶಗಳು ಜನನಿಬೀಡ ಪ್ರದೇಶಗಳಾಗಿದ್ದು, ಸದರಿ ಇಂದಿರಾ ಕ್ಯಾಂಟೀನ್‌ಗಳಲ್ಲಿ ಪ್ರತಿನಿತ್ಯ 500 ಪ್ಲೇಟ್ ಬೆಳಗಿನ ಉಪಹಾರ, 500 ಪ್ಲೇಟ್ ಮಧ್ಯಾಹ್ನ ಊಟ ಮತ್ತು 500 ಪ್ಲೇಟ್ ರಾತ್ರಿ ಊಟ ಪೂರೈಕೆ ಮಾಡಲಾಗುತ್ತಿದೆ. |

ಸಂಖ್ಯೆ:ನಅಇ 42 ಎಸ್‌ಎಫ್‌ಸಿ 2026

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು